ನ್ಯಾಯಬೆಲೆ ಅಂಗಡಿಗಳಲ್ಲಿ ನೀಡಿರುವ ಗೋಧಿ ಬೆಲೆಯನ್ನು ಏರಿಸುವ ಬಗ್ಗೆ

164 - ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಡಿತರ ಚೀಟಿಗಳಿಗೆ ನೀಡುತ್ತಿರುವ ಗೋಧಿಯ ಬೆಲೆಯನ್ನು ಹೆಚ್ಚಿಸಲು ಸರ್ಕಾರದವರು ಉದ್ದೇಶಿಸಿರುವರೆ?

ಆ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು?

ಇ) ಗ್ರಾಮಾಂತರ ಪ್ರದೇಶದಲ್ಲಿ ಪಡಿತರ ಚೀಟಿಯವರಿಗೆ ಅಕ್ಕಿಯನ್ನು 3-20 ರೂ. ಕೆ.ಜಿ.ಯಂತೆ ನೀಡುತ್ತಿದ್ದು ಗೋಧಿಯ ಬೆಲೆಯನ್ನು ಹೆಚ್ಚಿಸಿರುವುದರಿಂದ ಬಡವರಿಗೆ ತೊಂದರೆಯುಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಬಂದಿದ್ದಲ್ಲಿ ಗೋಧಿ ಬೆಲೆಯನ್ನು ಕಡಿಮೆ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ಎಸ್. ನಂಜಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ರಾಜ್ಯದ ತ್ರಿವರ್ಣ ಹಸಿರು ಚೀಟಿದಾರರಿಗೆ ರಿಯಾಯಿತಿ ದರದಲ್ಲಿ ಗೋಧಿಯನ್ನು ಸಹ ಲಭ್ಯಗೊಳಿಸುವ ಉದ್ದೇಶದಿಂದ ಮಾಹೆಯಾನ 10 ಕೆ.ಜಿ. ಅತ್ಯುತ್ತಮ ಅಕ್ಕಿ ಅಥವಾ ಪಡಿತರ ಚೀಟಿದಾರರ ಇಚ್ಛೆಯಂತೆ ಅಕ್ಕಿಯನ್ನು ಮತ್ತು ಗೋಧಿಯನ್ನು ಸೇರಿಸಿ ಒಟ್ಟು 10 ಕೆ.ಜಿ.ಗೆ ಮೀರದಂತೆ ವಿತರಿಸುವ ಕ್ರಮ ಕೈಗೊಳ್ಳಲಾಗಿದೆ. ರಿಯಾಯಿತಿ ದರದ ಅತ್ಯುತ್ತಮ ಅಕ್ಕಿ ಬೆಲೆ ಕೆ.ಜಿ. 1 ಕ್ಕೆ ರೂ. 3.20 ರಂತೆ ಹಾಗೂ ಗೋಧಿಯ ಬೆಲೆ ಕೆ.ಜಿ. 1 ಕ್ಕೆ ರೂ. 2.95 ಇರುತ್ತದೆ.

ಈ) ಉದ್ಭವಿಸುವುದಿಲ್ಲ.

ಬೆಂಗಳೂರಿನಲ್ಲಿ ಕೌಟುಂಬಿಕ ನ್ಯಾಯಾಲಯಗಳ ಸ್ಥಾಪನೆ

168 - ಶ್ರೀ ರಾಮಲಿಂಗಾ ರೆಡ್ಡಿ (ಜಯನಗರ) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನಲ್ಲಿ ಎರಡನೇ ಕೌಟುಂಬಿಕ ನ್ಯಾಯಲಯಕ್ಕೆ ನ್ಯಾಯಾಧೀಶರನ್ನು ನೇಮಿಸದೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ನ್ಯಾಯಾಧೀಶರನ್ನು ನೇಮಿಸಲು ಸರ್ಕಾರದವರು ಕ್ರಮ ಕೈಗೊಂಡಿರುವ ಕ್ರಮಗಳೇನು?

ಇ) ಬೆಂಗಳೂರು ನಗರದಲ್ಲಿ ಮೂರನೇ ಕೌಟುಂಬಿಕ ನ್ಯಾಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಶ್ರೀ ಎಂ.ಸಿ. ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ವಾರ್ತಾ ಮತ್ತು ಪ್ರಚಾರ ಸಚಿವರು) :

ಅ) ಬೆಂಗಳೂರಿನ ಒಂದು ಕುಟುಂಬ ನ್ಯಾಯಾಲಯದಲ್ಲಿ ನ್ಯಾಯಾಧೀಶರ ಹುದ್ದೆಯು ಖಾಲಿ ಇದೆ.

ಆ) ಆ ಹುದ್ದೆಯಲ್ಲಿ, ಬೆಂಗಳೂರಿನ ಮತ್ತೊಂದು ಕುಟುಂಬ ನ್ಯಾಯಾಲಯದ ಹೆಚ್ಚುವರಿ ನ್ಯಾಯಾಧೀಶರು ಪ್ರಭಾರದಲ್ಲಿ ಇದ್ದಾರೆ.